# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 409

ವಿಧಾನ ಪರಿಷತ್ತು ಸದಸ್ಯರ ಹೆಸರು : ಶ್ರೀ ಬಿ.ಜಿ. ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

ಉತ್ತರಿಸಬೇಕಾದ ದಿನಾಂಕ : 10.07.2023

ಉತ್ತರಿಸುವ ಸಚಿವರು : ಆಹಾರ ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಹಾಗೂ ಕಾನೂನು ಮಾಪನಶಾಸ್ತ್ರ ಇಲಾಖಾ ಸಚಿವರು.

<table>
<tr><th>ಕ್ರ. ಸಂ</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ</td><td>ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳಲ್ಲಿರುವ ಎ.ಪಿ.ಎಲ್/ಬಿ.ಪಿ.ಎಲ್ ಕಾರ್ಡ್‌ದಾರರ ಸಂಖ್ಯೆ ಎಷ್ಟು;(ವಿವರ ನೀಡುವುದು)</td><td>ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳಲ್ಲಿರುವ ಅಂತ್ಯೋದಯ ಅನ್ನ ಯೋಜನೆ, ಆದ್ಯತಾ ಮತ್ತು ಆದ್ಯತೇತರ ಪಡಿತರ ಚೀಟಿಗಳ ವಿವರ ಈ ಕೆಳಕಂಡಂತಿದೆ.
<table>
<tr><th>ಕ್ರ. ಸಂ</th><th>ಜಿಲ್ಲೆ</th><th>ಅಂತ್ಯೋದಯ ಅನ್ನ ಯೋಜನೆ</th><th>ಆದ್ಯತಾ</th><th>ಆದ್ಯತೇತರ</th></tr>
<tr><td>1</td><td>ಕಲಬುರಗಿ</td><td>62925</td><td>508589</td><td>115313</td></tr>
<tr><td>2</td><td>ಯಾದಗಿರಿ</td><td>29365</td><td>240430</td><td>17679</td></tr>
</table>
</td></tr>
<tr><td>ಆ</td><td>ಸದರಿ ಕಾರ್ಡ್‌ದಾರರಿಗೆ ರಾಜ್ಯ ಸರ್ಕಾರದಿಂದ ಸಿಗುವ ಸೌಲಭ್ಯಗಳೇನು;(ಎ.ಪಿ.ಎಲ್ /ಬಿ.ಪಿ.ಎಲ್ ಕಾರ್ಡ್‌ಗಳ ವಿವರ ನೀಡುವುದು)</td><td>ಪಡಿತರ ಚೀಟಿಯನ್ನು ಹೊಂದಿರುವ ಕುಟುಂಬಗಳಿಗೆ ವಿತರಿಸಲಾಗುತ್ತಿರುವ ಆಹಾರ ಧಾನ್ಯಗಳ ಪ್ರಮಾಣದ ಮಾಹಿತಿ ಈ ಕೆಳಕಂಡಂತಿದೆ.
<table>
<tr><th>ಪಡಿತರ ಚೀಟಿ ವರ್ಗ</th><th>ಅಕ್ಕಿ/ರಾಗಿ/ಜೋಳ (ಕೆ.ಜಿ.ಗಳಲ್ಲಿ)</th><th>ದರ ಪ್ರತಿ ಕೆ.ಜಿ (ರೂ.ಗಳಲ್ಲಿ)</th></tr>
<tr><td>ಅಂತ್ಯೋದಯ ಅನ್ನ ಯೋಜನೆ</td><td>ಪ್ರತಿ ತಿಂಗಳು 35 ಕೆ.ಜಿ. ಆಹಾರ ಧಾನ್ಯ</td><td>ಉಚಿತ</td></tr>
<tr><td>ಆದ್ಯತಾ ಕುಟುಂಬ</td><td>ಪಡಿತರ ಚೀಟಿಯಲ್ಲಿನ ಪ್ರತಿ ಫಲಾನುಭವಿಗೆ ಪ್ರತಿ ತಿಂಗಳು 05 ಕೆ.ಜಿ. ಆಹಾರ ಧಾನ್ಯ</td><td>ಉಚಿತ</td></tr>
</table>
</td></tr>
</table>

<table>
<tr>
<td></td>
<td></td>
<td>
<table>
<tr><td>ಆದ್ಯತೇತರ ಕುಟುಂಬ</td><td>ಏಕ ಸದಸ್ಯ ಪಡಿತರ ಚೀಟಿಗೆ 5ಕೆ.ಜಿ ಮತ್ತು ಎರಡು ಅಥವಾ ಹೆಚ್ಚಿನ ಸದಸ್ಯರಿರುವ ಪಡಿತರ ಚೀಟಿಗೆ 10 ಕೆ.ಜಿ. ಅಕ್ಕಿ</td><td>ರೂ.15/- ಪ್ರತಿ ಕೆ.ಜಿ.</td></tr>
</table>
2023ರ ಜುಲೈ ತಿಂಗಳಿಂದ ರಾಜ್ಯದಲ್ಲಿರುವ ಅಂತ್ಯೋದಯ ಅನ್ನ ಯೋಜನೆ ಮತ್ತು ಆದ್ಯತಾ ಪಡಿತರ ಚೀಟಿಗಳ ಪ್ರತಿ ಫಲಾನುಭವಿಗೆ ತಲಾ 10 ಕೆ.ಜಿ. ಆಹಾರ ಧಾನ್ಯವನ್ನು ಉಚಿತವಾಗಿ ವಿತರಿಸಲು ಆದೇಶಿಸಲಾಗಿದೆ.
ರಾಜ್ಯದಲ್ಲಿರುವ ಅಂತ್ಯೋದಯ ಅನ್ನ ಯೋಜನೆ ಮತ್ತು ಆದ್ಯತಾ ಪಡಿತರ ಚೀಟಿಯ ಪ್ರತಿ ಫಲಾನುಭವಿಗೆ ಪ್ರತಿ ತಿಂಗಳು 05 ಕೆ.ಜಿ. ಆಹಾರ ಧಾನ್ಯವನ್ನು ವಿತರಿಸಲು ಅಗತ್ಯವಿರುವ ಅಕ್ಕಿಯನ್ನು ಮುಕ್ತ ಮಾರುಕಟ್ಟೆಯಿಂದ ಖರೀದಿಸಲು, ಮುಕ್ತ ಟೆಂಡರ್‌ನ್ನು ಕರೆಯಲು ನಿರ್ಧರಿಸಲಾಗಿದೆ. ಸದರಿ ಟೆಂಡರ್ ಪ್ರಕ್ರಿಯೆ ಪೂರ್ಣಗೊಂಡು ಅಕ್ಕಿ ಸರಬರಾಜು ಆಗುವವರೆಗೆ 2023ರ ಜುಲೈ ಮಾಹೆಯಿಂದ ಜಾರಿಗೆ ಬರುವಂತೆ ಅಂತ್ಯೋದಯ ಅನ್ನ ಯೋಜನೆ ಮತ್ತು ಆದ್ಯತಾ ಪಡಿತರ ಚೀಟಿಯ ಪ್ರತಿ ಫಲಾನುಭವಿಗೆ ಹೆಚ್ಚುವರಿ 05 ಕೆ.ಜಿ. ಆಹಾರ ಧಾನ್ಯದ ಬದಲಾಗಿ ಪ್ರತಿ ಕೆ.ಜಿ.ಗೆ ರೂ.34/-ರ ದರದಲ್ಲಿ ನಗದು ಹಣವನ್ನು ಪಡಿತರ ಫಲಾನುಭವಿಯ ಕುಟುಂಬದ ಮುಖ್ಯಸ್ಥರ ಬ್ಯಾಂಕ್ ಖಾತೆಗೆ DBT ಮೂಲಕ ವರ್ಗಾಯಿಸಲು ನಿರ್ಧರಿಸಲಾಗಿದೆ.
</td>
</tr>
<tr>
<td>೩</td>
<td>ಬಿ.ಪಿ.ಎಲ್ ಕಾರ್ಡ್ ಪಡೆಯಲು ಸರ್ಕಾರ ನಿಗಧಿಪಡಿಸಿರುವ ಮಾನದಂಡಗಳೇನು?</td>
<td>
ಆದ್ಯತಾ ಪಡಿತರ ಚೀಟಿಯನ್ನು ಪಡೆಯಲು ಈ ಕೆಳಕಂಡಂತೆ ಹೊರಗಿಡುವ ಮಾನದಂಡಗಳನ್ನು ರೂಪಿಸಲಾಗಿದೆ.
• ವೇತನವನ್ನು ಗಣನೆಗೆ ತೆಗೆದುಕೊಳ್ಳದೆ ಎಲ್ಲಾ ಖಾಯಂ ನೌಕರರು ಅಂದರೆ ಸರ್ಕಾರದ ಅಥವಾ ಸರ್ಕಾರದಿಂದ ಅನುದಾನವನ್ನು ಪಡೆಯುತ್ತಿರುವ ಸಂಸ್ಥೆಗಳು ಅಥವಾ ಸರ್ಕಾರಿ ಪ್ರಾಯೋಜಿತ ಸರ್ಕಾರಿ ಸ್ವಾಮ್ಯದ ಸಂಸ್ಥೆಗಳು/ಮಂಡಳಿಗಳು/ನಿಗಮಗಳು/ಸ್ವಾಯತ್ತ ಸಂಸ್ಥೆಗಳು ಇತ್ಯಾದಿ ಒಳಗೊಂಡಂತೆ ಆದಾಯ ತೆರಿಗೆ/ಸೇವಾ ತೆರಿಗೆ/ ವ್ಯಾಟ್/ವೃತ್ತಿ ತೆರಿಗೆ ಪಾವತಿಸುವ ಎಲ್ಲಾ ಕುಟುಂಬಗಳು.
• ಗ್ರಾಮೀಣ ಪ್ರದೇಶಗಳಲ್ಲಿ 03 ಹೆಕ್ಟರ್ ಒಣಭೂಮಿ ಅಥವಾ ತತ್ಸಮಾನ ನೀರಾವರಿ ಭೂಮಿ ಹೊಂದಿರುವ ಕುಟುಂಬಗಳು ಅಥವಾ ಗ್ರಾಮೀಣ ಪ್ರದೇಶವನ್ನು ಹೊರತುಪಡಿಸಿ ನಗರ ಪ್ರದೇಶಗಳಲ್ಲಿ 1000 ಚದರ ಅಡಿಗಿಂತಲೂ ಹೆಚ್ಚಿನ ವಿಸ್ತೀರ್ಣದ ಪಕ್ಕಾ ಮನೆಯನ್ನು ಸ್ವಂತವಾಗಿ ಹೊಂದಿರುವ ಕುಟುಂಬಗಳು.
</td>
</tr>
</table>

| | | |
|---|---|---|
| | | • ಜೀವನೋಪಾಯಕ್ಕಾಗಿ ಸ್ವತಃ ಓಡಿಸುವ ಒಂದು ವಾಣಿಜ್ಯ ವಾಹನವನ್ನು ಅಂದರೆ ಟ್ರಾಕ್ಟರ್, ಮ್ಯಾಕ್ಸಿಕ್ಯಾಬ್, ಟ್ಯಾಕ್ಸಿ ಇತ್ಯಾದಿಗಳನ್ನು ಹೊಂದಿದ ಕುಟುಂಬವನ್ನು ಹೊರತುಪಡಿಸಿ ನಾಲ್ಕು ಚಕ್ರದ ವಾಹನಗಳನ್ನು ಹೊಂದಿರುವ ಎಲ್ಲಾ ಕುಟುಂಬಗಳು.<br>• ಕುಟುಂಬದ ವಾರ್ಷಿಕ ಆದಾಯವು ರೂ. 1.20 ಲಕ್ಷಗಳಿಗಿಂತಲೂ ಹೆಚ್ಚು ಇರುವ ಕುಟುಂಬಗಳು. |

ಆನಾಸ 121 ಡಿಆರ್ಎ 2023 (ಇ-ಆಫೀಸ್)

(ಕೆ.ಹೆಚ್. ಮುನಿಯಪ್ಪ)

ಆಹಾರ ನಾಗರಿಕ ಸರಬರಾಜು ಮತ್ತು ಗ್ರಾಹಕರ

ವ್ಯವಹಾರಗಳ ಹಾಗೂ ಕಾನೂನು ಮಾಪನಶಾಸ್ತ್ರ

ಇಲಾಖಾ ಸಚಿವರು